## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕು ಸುತ್ತೂರು ಗ್ರಾಮದ 2ನೇ ಹಂತದ ಒಳಚರಂಡಿ ಯೋಜನೆ ಅನುಷ್ಠಾನಗೊಳಿಸುವ ಸಲುವಾಗಿ ಅನುದಾನ ಒದಗಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಮೈಸೂರು ಜಿಲ್ಲಾ ಪಂಚಾಯತ್‌ರವರ ಪತ್ರ ಸಂಖ್ಯೆ: ಜಿಪಂಮೈ/ನಿ.ಭಾ.ಅ. (ಸ್ವಭಾ.ಮಿ. (ಗ್ರಾ))/ಸು.ಒ.ಚ./131/2012-13, ದಿನಾಂಕ:08.12.2017
2. ಮಾನ್ಯ ಗ್ರಾಅಪಂರಾ ಸಚಿವರ ಟಿಪ್ಪಣಿ ಸಂಖ್ಯೆ:ಗ್ರಾಅಪ/2021/2017-18, ದಿನಾಂಕ:16.12.2017
3. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರ ಟಿಪ್ಪಣಿ ಸಂಖ್ಯೆ:RWS 421 RDWSD 2016, ದಿನಾಂಕ:09.01.2018

--

**ಪೀಠಿಕೆ:**

ಮೇಲಿನ (1)ರಲ್ಲಿ ಓದಲಾದ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಮೈಸೂರು ಜಿಲ್ಲಾ ಪಂಚಾಯತ್ ರವರ ಪತ್ರದಲ್ಲಿ, ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕು ಸುತ್ತೂರು ಗ್ರಾಮದ 2ನೇ ಹಂತದ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಕಾಮಗಾರಿ ಕೈಗೊಳ್ಳುವ ಸಂಬಂಧ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮೈಸೂರು ವಿಭಾಗರವರಿಗೆ ಅನುದಾನ ಒದಗಿಸುವ ಸಲುವಾಗಿ ರೂ.626.00 ಲಕ್ಷಗಳ **(ಆರು ನೂರಾ ಇಪ್ಪತ್ತಾರು ಲಕ್ಷ ರೂಪಾಯಿಗಳು)** ಅಂದಾಜು ಮೊತ್ತಕ್ಕೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ. ಸದರಿ ಕೋರಿಕೆಗೆ ಅನುಗುಣವಾಗಿ ಮೇಲೆ ಓದಲಾದ (2) ಮತ್ತು (3)ರಲ್ಲಿ ಅನುಕ್ರಮವಾಗಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಆಯುಕ್ತರು, ಗ್ರಾ.ಕು.ನೀ.ನೈ. ಇಲಾಖೆರವರು ಸಹ ಅಗತ್ಯ ಕ್ರಮವಹಿಸಲು ಸೂಚಿಸಿರುತ್ತಾರೆ. ಉದ್ದೇಶಿತ ಯೋಜನೆಯು ಒಳಚರಂಡಿ ವ್ಯವಸ್ಥೆ ಒದಗಿಸುವುದಕ್ಕೆ ಸಂಬಂಧಿಸಿರುವುದರಿಂದ 2017-18ರ NRDWP ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಅಳವಡಿಸಿರುವುದಿಲ್ಲ. ಆದರೆ, ಸದರಿ ಪ್ರಸ್ತಾವನೆಯು ಸುತ್ತೂರು ಗ್ರಾಮ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಕಾಮಗಾರಿಯಾಗಿರುವುದರ ಮೇರೆಗೆ, ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ ಕಾಮಗಾರಿ ಕೈಗೊಳ್ಳಲು ತಿಳಿಸಿ, ಸದರಿ ಕಾಮಗಾರಿಗೆ ತಗಲುವ ವೆಚ್ಚ ರೂ.626.00 ಲಕ್ಷಗಳ ಅನುದಾನವನ್ನು ರಾಜ್ಯ ವಲಯದ 'ಸ್ವಚ್ಛ ಭಾರತ್ ಮಿಷನ್ (ಗ್ರಾ)' ಅಡಿಯಲ್ಲಿ ಭರಿಸುವ ಉದ್ದೇಶದಿಂದ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 10 ಗ್ರಾನೀಸ(2) 2017 ಬೆಂಗಳೂರು, ದಿನಾಂಕ:16.01.2018**

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕು ಸುತ್ತೂರು ಗ್ರಾಮದ 2ನೇ ಹಂತದ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಕಾಮಗಾರಿ ಕೈಗೊಳ್ಳಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮೈಸೂರು ವಿಭಾಗರವರಿಗೆ ಅನುದಾನ ಒದಗಿಸುವ ಸಲುವಾಗಿ ರೂ.626.00 ಲಕ್ಷಗಳ **(ಆರು ನೂರಾ ಇಪ್ಪತ್ತಾರು ಲಕ್ಷ ರೂಪಾಯಿಗಳು)** ಅಂದಾಜು ಮೊತ್ತಕ್ಕೆ, ರಾಜ್ಯವಲಯದ 'ಸ್ವಚ್ಛ ಭಾರತ್ ಮಿಷನ್ (ಗ್ರಾ)' ಯೋಜನೆಯಡಿಯಲ್ಲಿ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದಡಿ ಅನುಮೋದನೆಯಾದ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಕಾಮಗಾರಿಗೆ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ.
3. ಈ ಯೋಜನೆಯನ್ನು ಚಾಲ್ತಿ ಮಾರ್ಗಸೂಚಿಗಳನ್ವಯ, ಪಾರದರ್ಶಕ ನಿಯಮಗಳ (KTPP ಕಾಯ್ದೆಯನ್ವಯ) ಅನುಸಾರ ಅನುಷ್ಠಾನಗೊಳಿಸತಕ್ಕದ್ದು.
4. ಸದರಿ ಕಾಮಗಾರಿಯನ್ನು 2018-19ನೇ ಸಾಲಿನಲ್ಲಿಯೇ ಕೈಗೊಂಡು ಅನುಷ್ಠಾನಗೊಳಿಸುವ ಷರತ್ತಿನೊಂದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಪಿ. ಪ್ರಕಾಶ್)
ಆಯುಕ್ತರು ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1
6. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ನಂ.05, ಜಲಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು-1.
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B. Complex, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009.
11. ಅಪರ ನಿರ್ದೇಶಕರು, ಸ್ವಚ್ಛ ಭಾರತ್ ಮಿಷನ್ (ಗ್ರಾ), ಗ್ರಾ.ಕು.ನೀ.ನೈ. ಇಲಾಖೆ, ಬೆಂಗಳೂರು.
12. ಮುಖ್ಯ ಲೆಕ್ಕಾಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, **ಮೈಸೂರು**.
14. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಮೈಸೂರು**.
15. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವೃತ್ತ ಕಛೇರಿ, **ಮೈಸೂರು**.
16. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಮೈಸೂರು**.
17. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
18. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ (TNMC), ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
20. ಆಯುಕ್ತರು ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, RDW&SD/ ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರುಗಳು ಆಪ್ತ ಸಹಾಯಕರು
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-9.
22. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂರಾ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.